ವಿಜಯವಾಣಿ ನಂ 1

# ಸರ್ಕಾರಕ್ಕೆ ₹75 ಕೋಟಿ ದಂಡ

## ಕೆರೆ ಮಾಲಿನ್ಯ, ಪರಿಸರ ಸಂರಕ್ಷಣೆ ನಿರ್ಲಕ್ಷ್ಯಕ್ಕೆ ಎನ್‌ಜಿಟಿ ಚಾಟಿ

■ ವಿಜಯವಾಣಿ ಸುದ್ದಿಜಾಲ ನವದೆಹಲಿ

ಬೆಂಗಳೂರಿನ ಬೆಳ್ಳಂದೂರು, ಅಗರ ಮತ್ತು ವರ್ತೂರು ಕೆರೆಗಳ ಮಾಲಿನ್ಯ ತಡೆಯಲು ಸಂಪೂರ್ಣ ವಿಫಲವಾಗಿರುವ ಹಿನ್ನೆಲೆಯಲ್ಲಿ 75 ಕೋಟಿ ರೂ. ದಂಡ ಕಟ್ಟುವಂತೆ ರಾಜ್ಯ ಸರ್ಕಾರ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ (ಬಿಬಿಎಂಪಿ) ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ (ಎನ್‌ಜಿಟಿ) ಖಡಕ್ ಆದೇಶ ನೀಡಿದೆ.

» **ಆದೇಶ ಪಾಲನೆ ಆಗದಿದ್ದರೆ ಅಧಿಕಾರಿಗಳೇ ಹೊಣೆ**

ದೈನಂದಿನ ಜೀವನದ ಮೇಲೆ ದುಷ್ಪರಿಣಾಮಗಳನ್ನು ಬೀರುತ್ತಿರುವ ಬೆಂಗಳೂರು ಕೆರೆಗಳ ಅಭಿವೃದ್ಧಿ, ಸಂರಕ್ಷಣೆ ಬಗ್ಗೆ ಹಲವು ಆದೇಶಗಳನ್ನು ನೀಡಿದ್ದರೂ, ರಾಜ್ಯ ಸರ್ಕಾರ ಮತ್ತು ಬಿಬಿಎಂಪಿ ಸಮರ್ಪಕ ಕ್ರಮಗಳನ್ನು ಜಾರಿಗೆ ತರಲು ವಿಫಲವಾಗಿವೆ. ಮುಂದೆಯೂ ಇದೇ ಧೋರಣೆ ಮುಂದುವರಿದಲ್ಲಿ ಸಂಬಂಧಪಟ್ಟ ಅಧಿಕಾರಿಗಳೇ ಇದಕ್ಕೆ ಹೊಣೆ ಹೊತ್ತುಕೊಳ್ಳಬೇಕಾದೀತು ಎಂದು ಗಂಭೀರ ಎಚ್ಚರಿಕೆ ನೀಡಿರುವ ನ್ಯಾ. ಆದರ್ಶ್ ಕುಮಾರ್ ಗೋಯೆಲ್ ನೇತೃತ್ವದ ನಾಲ್ವರು ಸದಸ್ಯರ ನ್ಯಾಯಪೀಠ, ರಾಜ್ಯ ಸರ್ಕಾರ ರೂ.50 ಕೋಟಿ ರೂ. ದಂಡದ ಹಣವನ್ನು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಗೆ ಹಾಗೂ ಬಿಬಿಎಂಪಿ 25 ಕೋಟಿ ರೂ ಪೈಕಿ 10 ಕೋಟಿಯನ್ನು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗೆ ನೀಡಬೇಕು ಎಂದು ಸೂಚಿಸಿದೆ.

ನ್ಯಾಯಾಧಿಕರಣದ ಆದೇಶದಂತೆ ರಾಜ್ಯ ಸರ್ಕಾರ ಮತ್ತು ಬಿಬಿಎಂಪಿ ಕೆರೆಗಳ ಸಂರಕ್ಷಣೆ- ಅಭಿವೃದ್ಧಿ ಕಾರ್ಯ ಯೋಜನೆಗಳನ್ನು ರೂಪಿಸಬೇಕು. ಅನುಷ್ಠಾನದ ಮೇಲ್ವಿಚಾರಣೆಯನ್ನು ನಿವೃತ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ನೇತೃತ್ವದ ಸಮಿತಿ ನೋಡಿಕೊಳ್ಳಬೇಕು ಎಂದೂ ನ್ಯಾಯಾಧಿಕರಣ ನಿರ್ದೇಶನ ನೀಡಿದೆ. ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್‌ನ ಪ್ರೊಫೆಸರ್ ರಾಮಚಂದ್ರನ್ ಮತ್ತು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ತಜ್ಞರೊಬ್ಬರು ಈ ಸಮಿತಿಯ ಇತರ ಇಬ್ಬರು ಸದಸ್ಯರಾಗಿರಲಿದ್ದಾರೆ.

ಸಂಗ್ರಹ ಚಿತ್ರ



### ಸ್ವಯಂಪ್ರೇರಿತ ದೂರು

ಬೆಳ್ಳಂದೂರು ಕೆರೆಯಲ್ಲಿ ಎರಡು ಬಾರಿ ಬೆಂಕಿ ಹೊತ್ತಿಕೊಂಡಿದ್ದರ ಬಗ್ಗೆ ಮಾಧ್ಯಮ ಆಧರಿಸಿ ನ್ಯಾಯಾಧಿಕರಣ ಸ್ವಯಂಪ್ರೇರಿತ ದೂರು ದಾಖಲಿಸಿ ಕೊಂಡು ರಾಜ್ಯ ಸರ್ಕಾರ ಮತ್ತು ಬಿಬಿಎಂಪಿಗೆ ನೋಟೀಸ್ ಜಾರಿ ಮಾಡಿತ್ತು. ತದನಂತರ ನಮ್ಮ ಬೆಂಗಳೂರು ಫೌಂಡೇಷನ್ ಮತ್ತು ರಾಜ್ಯಸಭೆ ಸದಸ್ಯ ಕುಪೇಂದ್ರ ರೆಡ್ಡಿ ಕೂಡ ಪ್ರಕರಣದಲ್ಲಿ ತಮ್ಮನ್ನು ಪ್ರತಿವಾದಿಗಳಾಗಿ ಮಾಡಬೇಕು ಎಂದು ಕೇಳಿಕೊಂಡಿದ್ದರು.

### ಎನ್‌ಬಿಎಫ್ ಹೋರಾಟಕ್ಕೆ ಜಯ

ಬೆಳ್ಳಂದೂರು ಕೆರೆ ಮಾಲಿನ್ಯ ಸಂಬಂಧ ಬಿಬಿಎಂಪಿ ಹಾಗೂ ರಾಜ್ಯ ಸರ್ಕಾರಕ್ಕೆ ದಂಡ ವಿಧಿಸಿರುವ ರಾಷ್ಟ್ರೀಯ ಹಸಿರು ನ್ಯಾಯಪೀಠ (ಎನ್‌ಜಿಟಿ) ಆದೇಶವನ್ನು ನಮ್ಮ ಬೆಂಗಳೂರು ಪ್ರತಿಷ್ಠಾನ (ಎನ್‌ಬಿಎಫ್) ಸ್ವಾಗತಿಸಿದೆ. ರಾಜ್ಯ ಸರ್ಕಾರದ ಅಧಿಕಾರಿಗಳು, ಸ್ಥಳೀಯ ಸಂಸ್ಥೆ ಮತ್ತು ಜನಪ್ರತಿನಿಧಿಗಳ ನಿರ್ಲಕ್ಷ್ಯಕ್ಕೆ ಎನ್‌ಜಿಟಿ ಚಾಟಿ ಬೀಸಿದೆ. ನಮ್ಮ ಬೆಂಗಳೂರು ಪ್ರತಿಷ್ಠಾನ ಕಳೆದ 10 ವರ್ಷಗಳಿಂದ ನಿರಂತರವಾಗಿ ನಗರದ ಕೆರೆ, ರಾಜಕಾಲುವೆ, ಅಕ್ರಮ ಕಟ್ಟಡಗಳ ಒತ್ತುವರಿ ಸೇರಿ 25ಕ್ಕೂ ಹೆಚ್ಚಿನ ಪಿಐಎಲ್ ದಾಖಲಿಸಿ ನಡೆಸಿದ ಹೋರಾಟ ಸಾರ್ಥಕವಾಗಿದೆ ಎಂದು ಪ್ರತಿಷ್ಠಾನದ ಸಿಇಒ ಎನ್.ಆರ್. ಸುರೇಶ್ ತಿಳಿಸಿದ್ದಾರೆ.

### ಜಲಮಾಲಿನ್ಯ ಅಪರಾಧ

ಜಲಮಾಲಿನ್ಯ ಕ್ರಿಮಿನಲ್ ಅಪರಾಧ. ಬೆಂಗಳೂರಿನ ಕೆರೆಗಳು ಮತ್ತು ರಾಜಕಾಲುವೆ ಪ್ರದೇಶಗಳ ಅತಿಕ್ರಮಕ್ಕೆ ಕಡಿವಾಣ ಹಾಕುವಲ್ಲಿ ಸರ್ಕಾರ ಮತ್ತು ಸ್ಥಳೀಯಾಡಳಿತ ಸಂಪೂರ್ಣ ವಿಫಲವಾಗಿದೆ. ನಗರಗಳ ಘನತ್ಯಾಜ್ಯ ನಿರ್ವಹಣೆ ಸ್ಥಳೀಯಾಡಳಿತದ ಜವಾಬ್ದಾರಿ ಎಂದು ಸಂವಿಧಾನದಲ್ಲೂ ದಾಖಲಾಗಿದೆ. ಹೀಗಿದ್ದರೂ, ಸರ್ಕಾರ ಮತ್ತು ಬಿಬಿಎಂಪಿ ಎಚ್ಚೆತ್ತುಕೊಳ್ಳದೆ ಕ್ರಮ ಕೈಗೊಳ್ಳಲಿಲ್ಲ ಎಂದು ಎನ್‌ಜಿಟಿ ಆಕ್ರೋಶ ಹೊರಹಾಕಿದೆ.

ಬೆಂಗಳೂರು ಕೆರೆ, ಪರಿಸರ ಪುನರುಜ್ಜೀವನಕ್ಕೆ ಅಡಿಪಾಯ ಹಾಕುವ ಮಹತ್ವದ, ಐತಿಹಾಸಿಕ ತೀರ್ಪು ಇದು. ಇನ್ನಾದರೂ ಆಡಳಿತ ವ್ಯವಸ್ಥೆ ರಾಜಧಾನಿಯ ಜಲ ಸಂರಕ್ಷಣೆಗೆ ಹೊಣೆಗಾರಿಕೆಯಿಂದ ಕೆಲಸ ಮಾಡಬಹುದು ಎಂಬ ಆಶಾಭಾವ ಬಂದಿದೆ.



| **ಸಜನ್ ಪೂವಯ್ಯ** ನಮ್ಮ ಬೆಂಗಳೂರು ಫೌಂಡೇಷನ್ ಪರ ವಕೀಲ

ಕಾನೂನು, ನ್ಯಾಯಾಂಗದ ಆದೇಶಗಳಿಂದ ಮಾತ್ರ ಕೆರೆ-ಪರಿಸರಗಳ ಸಂರಕ್ಷಣೆ ಸಾಧ್ಯವಾಗದು. ಕಾನೂನು ಹೋರಾಟ ಇದರ ಒಂದು ಭಾಗವಷ್ಟೇ. ಸರ್ಕಾರದ ಜತೆಗೆ ಸಾರ್ವಜನಿಕರೂ ತಮ್ಮ ಜವಾಬ್ದಾರಿಗಳನ್ನು ಅರಿತು, ಆರೋಗ್ಯಕರ ಪರಿಸರ ನಿರ್ಮಾಣಕ್ಕೆ ಕೈಜೋಡಿಸಬೇಕು.

| **ರಾಮ್‌ಪ್ರಸಾದ್** ಕುಪೇಂದ್ರ ರೆಡ್ಡಿ ಪರ ವಕೀಲ